| | | | |
|---|---|---|---|
| ಕರ್ನಾಟಕ ಸರ್ಕಾರ | (ಸಿ.ಆರ್.ಪಿ-67) | | |
| ಹೇಳಿಕೆ ಹಾಳೆ (ಆರ್.ಸಿ. ಸಂಖ್ಯೆ 57) ನಮೂನೆ ಸಂಖ್ಯೆ 4 | ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಚನ್ನಪಟ್ಟಣ | | |
| | ಸಿ.ಸಿ ನಂ. 4609/2022 | | |
| | | ಸಿ.ಡಬ್ಲೂ | 4 |
| | | ಪಿ.ಡಬ್ಲೂ | 9 |
| ಸಾಕ್ಷಿದಾರರ ಹೆಸರು | ರಮೇಶ್ ಬಿನ್ ತಿಮ್ಮೇಗೌಡ | | |
| ವಯಸ್ಸು | 49 ವರ್ಷ | | |
| ಉದ್ಯೋಗ | ವ್ಯಾಪಾರ | | |
| ವಾಸಸ್ಥಳ | ಚನ್ನಪಟ್ಟಣ | | |

**ದಿನಾಂಕಃ- 12.01.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1) ಸಾಕ್ಷಿಯು ನಿಪಿ.1 ಪಂಚನಾಮೆ ಮತ್ತು ಅದರ ಮೇಲೆ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.1(ಸಿ) ಎಂದು ಗುರುತಿಸಲಾಯಿತು. ನಿಪಿ.1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ.1 ಕ್ಕೆ ಪೊಲೀಸರ ಕೋರಿಕೆಯ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಅನುಮತಿ ಕೋರಿದ್ದು, ಕೋರಿಕೆಯ ಮೇರೆಗೆ ಅನುಮತಿ ನೀಡಲಾಗಿದೆ.**

**ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1) ದಿಃ- 06.03.2022 ರಂದು ಆರೋಪಿತನು ಗೂಡ್ಸ್ ವಾಹನದಲ್ಲಿ 57 ಪ್ಲಾಸ್ಟಿಕ್ ಚೀಲದಲ್ಲಿ ಅಕ್ಕಿಯನ್ನು ತೆಗೆದುಕೊಂಡು ಕಾಳಸಂತೆಯಲ್ಲಿ ಮಾರಾಟ ಮಾಡಲು ಹೋಗುತ್ತಿದ್ದಾಗ ಅದನ್ನು ಪೊಲೀಸರು ದಾಳಿ ಮಾಡಿ ಹಿಡಿದ ಕಾಲಕ್ಕೆ ನಾನು ಸ್ಥಳದಲ್ಲಿ ಪೊಲೀಸರ ಜೊತೆ ಹಾಜರಿದ್ದೆನು ಎಂದರೆ ಸರಿಯಲ್ಲ. ಆ ವೇಳೆಯಲ್ಲಿ ಪೊಲೀಸರು ನನ್ನ ಸಮಕ್ಷಮ ವಾಹನದ ಭಾವಚಿತ್ರವನ್ನು ತೆಗೆದರು ಎಂದರೆ ಸರಿಯಲ್ಲ. ಆರೋಪಿತರನ್ನು ನನ್ನ ಸಮಕ್ಷಮ ದಸ್ತಗಿರಿ ಮಾಡಿ ಮರುದಿನ ಗುನ್ಹಾ ಸ್ಥಳದಲ್ಲಿ ಆರೋಪಿತರು ಕೃತ್ಯಕ್ಕೆ ಬಳಸಿದ ವಾಹನ ಮತ್ತು ಅಕ್ಕಿ ಮೂಟೆಗಳನ್ನು ಜಪ್ತುಪಡಿಸಿ ನಿಪಿ.1 ರಂತೆ ಪಂಚನಾಮೆ ಮಾಡಿ ಅಲ್ಲಿಯೇ ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳ ಕುರಿತು ದಿಃ

05.04.2022 ರಂದು ಪೊಲೀಸರಿಗೆ ಈಗ ಓದಿ ಹೇಳಿದಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತನು ನನಗೆ ಪರಿಚಯ ಇದ್ದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**ಪಾಟೀ ಸವಾಲುಃ- ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಣ ಮಾಡಲಾಯಿತು.)**

**ಓ.ಹೇ.ಕೆ.ಸರಿ ಇದೆ.**

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ.ದಂ.ಗಳು**
**ಚನ್ನಪಟ್ಟಣ**